ಮಾನ್ಯ ಕರ್ನಾಟಕ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಶ್ರೀ ಸುನೀಲ್ ವಲ್ಯಾಪುರ್, ಶ್ರೀ ಎನ್.ರವಿಕುಮಾರ್, ಡಾ. ವೈ.ಎ. ನಾರಾಯಣಸ್ವಾಮಿ, ಶ್ರೀ ಡಿ.ಎಸ್. ಅರುಣ್ ಹಾಗೂ ಇತರರುಗಳ ನಿಯಮ 330 ರಡಿ ಸೂಚನೆಗೆ ಉತ್ತರಿಸುವ ಬಗ್ಗೆ.

**ವಿಷಯ:**

ದೇಶದ ಶೈಕ್ಷಣಿಕ ಸಂರಚನೆಯನ್ನು ಪುನರ್ ರಚಿಸುವ, ಭಾರತೀಯ ಜ್ಞಾನ ಪರಂಪರೆಯನ್ನು ಆಧರಿಸಿರುವ, ಭಾರತದ ಸಾಂವಿಧಾನಿಕ ಮೌಲ್ಯಗಳನ್ನು ಗೌರವಿಸುವ ಜವಬ್ದಾರಿಯುತ ಭವಿಷ್ಯದ ನಾಗರೀಕತೆಯನ್ನು ರೂಪಿಸಿ ಸ್ವಾಭಿಮಾನಿ ಬಲಿಷ್ಠ ರಾಷ್ಟ್ರ ನಿರ್ಮಾಣ ಮಾಡುವ ಘನ ಉದ್ದೇಶದಿಂದ ಸ್ವಾಂತಂತ್ರ್ಯ ನಂತರ ಸಮಗ್ರ ತಿದ್ದುಪಡಿಯೊಂದಿಗೆ, 34 ವರ್ಷಗಳ ನಂತರ ಜಾರಿಗೆ ಬಂದಿರುವ ರಾಷ್ಟ್ರೀಯ ಶಿಕ್ಷಣ ನೀತಿ-2020 ನ್ನು ರಾಜಕೀಯ ಪ್ರೇರಿತವಾಗಿ ರದ್ದು ಮಾಡಿ ವಿದ್ಯಾರ್ಥಿಗಳ ಹಾಗೂ ದೇಶದ ಭವಿಷ್ಯದೊಂದಿಗೆ ಚೆಲ್ಲಾಟ ಆಡಲು ಹೊರಟಿರುವುದರಿಂದ ಹಾಗೂ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ತಲೆದೋರಿರುವ ಗೊಂದಲ-ಆತಂಕಗಳ ಗಂಭೀರ ವಿಷಯದ ಕುರಿತು ನಿಯಮ 59ರಡಿ ನಿಲುವಳಿ ಮಂಡಿಸಲು ಅನುಮತಿ ಕೋರುತ್ತೇವೆ.

**ಸರ್ಕಾರದ ಉತ್ತರ:**

ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ರಾಷ್ಟ್ರೀಯ ಶಿಕ್ಷಣ ನೀತಿ-2020 ಅನ್ನು ರಾಜ್ಯ ಸರ್ಕಾರವು ರದ್ದುಗೊಳಿಸಿರುವುದಿಲ್ಲ.

ಹಾಲಿ 2023-24ನೇ ಶೈಕ್ಷಣಿಕ ಸಾಲಿನಲ್ಲಿ ಕಳೆದ ಎರಡು ಶೈಕ್ಷಣಿಕ ವರ್ಷಗಳಿಂದ ಈಗಾಗಲೇ ಅಳವಡಿಸಿಕೊಂಡಿದ್ದ ಪಠ್ಯಕ್ರಮಗಳನ್ನು ಮುಂದುವರೆಸಿದ್ದು, ಪ್ರಸ್ತುತ ವಿದ್ಯಾರ್ಥಿಗಳು ಸದರಿ ಪಠ್ಯಕ್ರಮಗಳನ್ನೇ ಅಭ್ಯಾಸ ಮಾಡುತ್ತಿರುವುದರಿಂದ ರಾಜ್ಯದ ವಿದ್ಯಾರ್ಥಿ ಸಮೂಹಕ್ಕೆ ಹಾಗೂ ಮುಂದಿನ ವ್ಯಾಸಂಗಕ್ಕೆ ಯಾವುದೇ ಅಡಚಣೆ/ತೊಂದರೆಯಾಗಿರುವುದಿಲ್ಲ.

ಭಾರತ ದೇಶವು ಬಹು ಸಂಸ್ಕೃತಿ, ಬಹು ಭಾಷೆ ಹಾಗೂ ಬಹು ಆರ್ಥಿಕ-ಸಾಮಾಜಿಕ ಪರಿಸ್ಥಿತಿಯನ್ನು ಹೊಂದಿರುವ ದೇಶವಾಗಿದೆ. ಇತರ ರಾಜ್ಯಗಳಂತೆ ಕರ್ನಾಟಕ ರಾಜ್ಯವು ತನ್ನದೇ ಆದ ವೈಶಿಷ್ಟತೆ (Uniqueness) ಹೊಂದಿದೆ. ವಿಶೇಷವಾಗಿ, ಶೈಕ್ಷಣಿಕ ರಂಗದಲ್ಲಿ ಕರ್ನಾಟಕ ರಾಜ್ಯವು ದೇಶದ ಇತರೆ ಭಾಗಗಳಿಗೆ ಹೋಲಿಸಿದಲ್ಲಿ, ತನ್ನದೇ ಗುಣಮಟ್ಟ ಮತ್ತು ಛಾಪನ್ನು ಹೊಂದಿದೆ. ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯವು ಗುಣಾತ್ಮಕ ಶಿಕ್ಷಣಕ್ಕೆ ಸಾರ್ವತ್ರಿಕ ನೆಲೆಗಟ್ಟಿನಲ್ಲಿ ಅವಕಾಶಗಳನ್ನು ನೀಡಲು ಹಾಗೂ ಆರ್ಥಿಕ ಪ್ರಗತಿ, ಸಾಮಾಜಿಕ ನ್ಯಾಯ ಮತ್ತು ಸಮಾನತೆ, ವೈಜ್ಞಾನಿಕ ಮುನ್ನಡೆ, ರಾಜ್ಯ ಏಕತೆ ಹಾಗೂ ಸಾಂಸ್ಕೃತಿಕ ಸಂರಕ್ಷಣೆ, ಜಾಗತಿಕ ಮುಂದಾಳತ್ವ – ಈ ಗುರಿಗಳನ್ನು ಸಾಧಿಸುವ ದೃಷ್ಟಿಯಿಂದ ರಾಜ್ಯದಲ್ಲಿ ಗುಣಾತ್ಮಕ ಶಿಕ್ಷಣವನ್ನು ಅಳವಡಿಸಿಕೊಳ್ಳಬೇಕಾಗುತ್ತದೆ.

ರಾಷ್ಟ್ರೀಯ ಶಿಕ್ಷಣ ನೀತಿಯ ಆಶಯಗಳಿಗೆ ವಿರೋಧ ಇಲ್ಲದಂತೆ ರಾಜ್ಯದಲ್ಲಿ ಪ್ರಾದೇಶಿಕ ಸಮತೋಲನ ಕಾಪಾಡುವ ದೃಷ್ಟಿಯಿಂದ ರಾಜ್ಯ ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿಗೆ ಅನುಗುಣವಾಗಿ ರಾಜ್ಯದಲ್ಲಿ ಶಿಕ್ಷಣ ನೀತಿಯನ್ನು ರೂಪಿಸಬೇಕಾಗುತ್ತದೆ.

ಕರ್ನಾಟಕದಲ್ಲಿ ಶಾಲಾ ಮತ್ತು ಉನ್ನತ ಶಿಕ್ಷಣದಲ್ಲಿ ಪ್ರವೇಶಾತಿಯನ್ನು ಹೆಚ್ಚಿಸಲು ಗುಣಮಟ್ಟವನ್ನು ಉತ್ತಮಪಡಿಸಿ, ಸುಧಾರಿತ ಗುಣಮಟ್ಟದ ಶಿಕ್ಷಣದ ಲಭ್ಯತೆಯನ್ನು ಎಲ್ಲರಿಗೂ ನೀಡುವ ಮೂಲಕ ಶಿಕ್ಷಣವನ್ನು ವಿಸ್ತರಿಸಲು, ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಅರಿವನ್ನು ಮೂಡಿಸಲು, ಕೌಶಲ್ಯಾಧಾರಿತ ಹಾಗೂ ವೃತ್ತಿ ತರಬೇತಿ ನೀಡುವ ಮೂಲಕ ವಿದ್ಯಾರ್ಥಿಗಳ ಉದ್ಯೋಗ್ಯಾರ್ಹತೆಯನ್ನು ಹೆಚ್ಚಿಸಲು ಮತ್ತು ನೈತಿಕ ಶಿಕ್ಷಣವನ್ನು ನೀಡುವ ಮೂಲಕ ಉತ್ತಮ ನಾಗರೀಕರನ್ನು ನಿರ್ಮಾಣ ಮಾಡಲು ಅನುವಾಗುವಂತೆ ಶಿಕ್ಷಣದ ಪ್ರಮುಖ ಗುರಿಗಳನ್ನು ಸಾಧಿಸಲು ಶಾಲಾ ಮತ್ತು ಉನ್ನತ ಶಿಕ್ಷಣವನ್ನು ಜಾಗರೂಕತೆಯಿಂದ ಪರಿಶೀಲಿಸಿ ಸೂಕ್ತ ನೀತಿಗಳನ್ನು ಶಿಫಾರಸ್ಸು ಮಾಡಲು ಶ್ರೇಷ್ಠ ಶಿಕ್ಷಣ ತಜ್ಞರಾದ Prof. Sukhdev Thorat, an eminent Educationist, Indian Economist, Professor, Writer and Former Chairman of UGC, New-Delhi, ಇವರ ಅಧ್ಯಕ್ಷತೆಯಲ್ಲಿ 15 ಸದಸ್ಯರ ಹಾಗೂ 8 ಸಲಹೆಗಾರರನ್ನೊಳಗೊಂಡ ಶಿಕ್ಷಣ ತಜ್ಞರ ರಾಜ್ಯ ಶಿಕ್ಷಣ ಆಯೋಗವನ್ನು ಸರ್ಕಾರದ ಆದೇಶ ಸಂಖ್ಯೆ: ಇಡಿ 166 UNE 2023, ದಿನಾಂಕ: 11.10.2023ರನ್ವಯ ರಚಿಸಲಾಗಿದೆ. ರಾಷ್ಟ್ರೀಯ ಶಿಕ್ಷಣ ನೀತಿಯು ಸಾಧಿಸಬಹುದಾಗಿರುವುದಕ್ಕಿಂತ ಹೆಚ್ಚು ಪರಿಣಾಮಕಾರಿಯಾಗಿ ಗುಣಾತ್ಮಕ ಶಿಕ್ಷಣವನ್ನು ಜಾರಿಗೆ ತರಲು ರಾಜ್ಯ ಸರ್ಕಾರವು ಮುಂದಾಗಿದೆ.

ಸದರಿ ಆಯೋಗವು ರಾಜ್ಯಕ್ಕೆ ಅವಶ್ಯಕವಿರುವ ಶಿಕ್ಷಣ ನೀತಿಯನ್ನು ರೂಪಿಸಲು ಸೂಕ್ತ ಶಿಫಾರಸ್ಸುಗಳನ್ನು ನೀಡುತ್ತದೆ ಹಾಗೂ ಅವಶ್ಯವಿರುವ ಪಠ್ಯಕ್ರಮಗಳ ರೂಪುರೇಷೆಗಳನ್ನು ಸಲಹಾತ್ಮಕವಾಗಿ ನೀಡುವುದೇ ಹೊರತು ಪಠ್ಯಕ್ರಮಗಳನ್ನು ಸಿದ್ಧಪಡಿಸುವ ಸಮಿತಿಯಾಗಿರುವುದಿಲ್ಲ. ದೇಶದಲ್ಲಿ ನೂತನ ರಾಷ್ಟ್ರೀಯ ಶಿಕ್ಷಣ ನೀತಿ -2020 ಸೇರಿದಂತೆ ಇಲ್ಲಿಯವರೆಗೂ ರಚನೆಗೊಂಡು ಅನುಷ್ಠಾನಗೊಂಡಿರುವ ಎಲ್ಲಾ ಶಿಕ್ಷಣ ನೀತಿ ಆಯೋಗಗಳ ವರದಿಗಳನ್ನು ಪರಿಗಣಿಸಿ ರಾಜ್ಯದ ಸ್ಥಳೀಯ, ಭೌಗೋಳಿಕ, ಅಂತರಾಷ್ಟ್ರೀಯ, ಸಾಮಾಜಿಕ, ಆರ್ಥಿಕ, ಗ್ರಾಮೀಣ ಅವಶ್ಯಕತೆಗಳು ಇತ್ಯಾದಿ ಅಂಶಗಳನ್ನು ಪರಿಗಣಿಸಿ ರಾಜ್ಯಕ್ಕೆ ಅವಶ್ಯಕವಿರುವ ಶಿಕ್ಷಣ ನೀತಿಯನ್ನು ರಾಜ್ಯ ಶಿಕ್ಷಣ ಆಯೋಗವು ಶಿಫಾರಸ್ಸು ಮಾಡಲು ಕೋರಿದೆ. ವರದಿಯನ್ನು ಸಿದ್ಧಪಡಿಸುವ ಮುಂಚಿತವಾಗಿ ಶಿಕ್ಷಣ ರಂಗದ ಎಲ್ಲಾ ಹಿತಾಸಕ್ತಿದಾರರೊಂದಿಗೆ ವ್ಯಾಪಕವಾಗಿ ಚರ್ಚಿಸಿ ರಾಜ್ಯದ ಎಲ್ಲಾ ವಿಭಾಗಗಳಲ್ಲಿ ಅಭಿಪ್ರಾಯ ಸಂಗ್ರಹಿಸಲಾಗುವುದು. ಅಲ್ಲದೇ ವಿವಿಧ ರಾಜ್ಯಗಳಲ್ಲಿ ಜಾರಿಯಲ್ಲಿರುವ ಶಿಕ್ಷಣ ನೀತಿಗಳನ್ನೂ ಸಹ ಅಧ್ಯಯನ ಮಾಡಲು ಉದ್ದೇಶಿಸಿದೆ. ಆನಂತರವಷ್ಟೆ ರಾಜ್ಯಕ್ಕೆ ಅಗತ್ಯವಾದ ಶಿಕ್ಷಣ ನೀತಿ ರೂಪುಗೊಳ್ಳಲಿದೆ.

ರಾಷ್ಟ್ರೀಯ ಶಿಕ್ಷಣ ನೀತಿಗಿಂತ ಹೆಚ್ಚು ಸೂಕ್ತವಾದ ಹಾಗೂ ರಾಜ್ಯದ ಹಿತಾಸಕ್ತಿಗಳಿಗೆ ಅನುಕೂಲಕರವಾದ ಶಿಕ್ಷಣ ನೀತಿ ಹೊಂದುವುದು ಸರ್ಕಾರದ ಸದುದ್ದೇಶವಾಗಿದೆ.

************************

ಸಂಖ್ಯೆ: ಇಡಿ 251 ಯುಎನ್‌ಇ 2023

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು